ಜಮಖಂಡಿ ತಾಲ್ಲೂಕಿನ ಪಶುಚಿಕಿತ್ಸಾಲಯ ಸಾವಳಗಿ ಮತ್ತು ಮರೆಗುದ್ದಿಯ ಕಟ್ಟಡವನ್ನು ಆರ್ ಐ ಡಿ ಎಫ್ ನಬಾರ್ಡ ಯೋಜನೆಯಡಿ ನಿರ್ಮಾಣ ಪ್ರಾರಂಭಿಸಲಾಗಿದೆ ಪಶು ಆಸ್ಪತ್ರೆ, ಬನಹಟ್ಟಿ ಹಾಗೂ ಪಶು ಚಿಕಿತ್ಸಾಲಯ, ತೊದಲಬಾಗಿ ಕಟ್ಟಡಗಳ ದುರಸ್ಥಿಯನ್ನು ಪ್ರಸ್ತುತ ಸಾಲಿನ ಜಿಲ್ಲಾ ಪಂಚಾಯತ್ ಯೋಜನೆ ಲೆಕ್ಕ ಶೀರ್ಷಿಕೆಯಡಿ (ಕಟ್ಟಡ) ಕೈಗೊಳ್ಳ ಲಾಗುತ್ತದೆ ಪ್ರಾಥಮಿಕ ಪಶುಚಿಕಿತ್ಸಾ ಕೇಂದ್ರ, ನಾವಲಗಿ ಮತ್ತು ಪಶು ಆಸ್ಪತ್ರೆ, ಜಮಖಂಡಿಯ ದುರಸ್ಥಿ ಕಾರ್ಯಗಳನ್ನು ಪ್ರಕೃತಿ ವಿಕೋಪ ಪರಿಹಾರ ನಧಿ ಕಾರ್ಯಕ್ರಮದ ಅಡಿ ಕ್ರಮ ಕೈಗೊಳ್ಳಲಾಗಿದೆ

187(370) ಶ್ರೀ ಸಿದ್ದು ಸಾವದಿ (ಜಮಖಂಡಿ)

ಮಾನ್ಯ ಆರೋಗ್ಯ ಮತ್ತು ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ

ಅ) ಜಮಖಂಡಿ ತಾಲ್ಲೂಕಿನಲ್ಲಿಯ ಜನಸಂಖ್ಯೆಗೆ ಅನುಗುಣವಾಗಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು ,ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮವೇನು?

ಇ) ಸರ್ಕಾರದ ನಿಯಾಮವಳಿಯ ಪ್ರಕಾರ ತಾಲ್ಲೂಕಿನಲ್ಲಿ ಇನ್ನೂ ಏಳು ಕಡೆ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಪ್ರಾರಂಭಿಸಬೇಕಾಗಿದ್ದು ಯಾವಾಗ ,ಭರ್ತಿ ಮಾಡಲಾಗುವುದು?

ಈ)ಹಾಲಿ ಇರುವ ಕೇಂದ್ರಗಳಲ್ಲಿ ವೈದ್ಯರ ಕೊರತೆ ಇದ್ದಲ್ಲಿ ಯಾವಾಗ ಭರ್ತಿ ಮಾಡಲಾಗುವುದು?

ಉ)ತಾಲ್ಲೂಕಿನ ಅನೇಕ ಹಳ್ಳಿಗಳಲ್ಲಿ ಎ ಎನ್ ಎಮ್ ಗಳು ಇರುವುದಿಲ್ಲ ವಾದ್ದರಿಂದ ಯಾವಾಗ ನೇಮಿಸಲಾಗುವುದು?

ಊ) ಎ ಎನ್ ಎಮ್ ಗಳ ಸೆಂಟರ್(ಕಟ್ಟಡಗಳು) ದುರಸ್ಥಿಯಾಗಿದ್ದು ಅವುಗಳನ್ನು ದುರಸ್ಥಿಗೊಳಿಸಲು ಸರ್ಕಾರ ಯಾವಾಗ ಕ್ರಮ ಕೈಗೊಳ್ಳುವುದು?

ಶ್ರೀ ಆರ್ ಅಶೋಕ್

ಅ)ಬಂದಿದೆ

ಆ) ಜಮಖಂಡಿ ತಾಲ್ಲೂಕಿನಲ್ಲಿ ಗ್ರಾಮೀಣ ಜನಸಂಖ್ಯೆ 2,56,665 ಇರುತ್ತದೆ ಜಮಖಂಡಿ ತಾಲ್ಲೂಕಿನಲ್ಲಿ ಒಂದು ತಾಲ್ಲೂಕು ಆಸ್ಪತ್ರೆ, ಒಂದು ಸಮುದಾಯ ಆರೋಗ್ಯ ಕೇಂದ್ರ ಮತ್ತು ಎಂಟು ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತದೆ ಜನಸಂಖ್ಯೆಗೆ ಅನುಗುಣವಾಗಿ ಇಲ್ಲಿ ಹೆಚ್ಚುವರಿ ಬೇಕಾಗಿರುವ ಕೇಂದ್ರಗಳನ್ನು ತೆರೆಯುವ ಬಗ್ಗೆ ಮಾರ್ಗಸೂಚಿ ಪ್ರಕಾರ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು

ಇ) ತಾಲ್ಲೂಕಿನ ಒಟ್ಟು ಗ್ರಾಮೀಣ ಜನಸಂಖ್ಯೆ 2,56,665 ಇದ್ದು ಈಗಾಗಲೇ 8 ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಒಂದು ಸಮುದಾಯ ಆರೋಗ್ಯ ಕೇಂದ್ರ ಮತ್ತು ಒಂದು ತಾಲ್ಲೂಕು ಆಸ್ಪತ್ರೆ ಇರುತ್ತವೆ ಮಾರ್ಗಸೂಚಿ ಪ್ರಕಾರ ಇನ್ನೂ ಎರಡು ಪ್ರಾಥಮಿಕ ಆರೋಗ್ಯ ಕೇಂದ್ರಗಳ ಅಗತ್ಯವಿದೆ ಈ ಬಗ್ಗೆ ಪರಿಶೀಲಿಸಿ ಅನುದಾನ ಲಭ್ಯತೆಗೆ ಅನುಗುಣವಾಗಿ ಕ್ರಮ ಕೈಗೊಳ್ಳಲಾಗುವುದು

ಈ) ಜಮಖಂಡಿ ತಾಲ್ಲೂಕಿನ ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ 22 ವೈದ್ಯಾಧಿಕಾರಿಗಳ ಹುದ್ದೆ ಮಂಜೂರಾಗಿದ್ದು ಅವುಗಳಲ್ಲಿ 20 ವೈದ್ಯಾಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ ಹಾಗೂ ಒಬ್ಬರು ಆಯುಷ್ ವೈದ್ಯಾಧಿಕಾರಿಯನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗಿದೆ ಒಂದು ವೈದ್ಯಾಧಿಕಾರಿ ಹುದ್ದೆ ಮಾತ್ರ ಖಾಲಿ ಇದೆ ಖಾಲಿ ಇರುವ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡುವ ಸಲುವಾಗಿ ವಿಶೇಷ ನೇರ ನೇಮಕಾತಿ ಸಮಿತಿ ಮುಖಾಂತರ ನೇಮಕಾತಿ ಪ್ರಕ್ರಿಯೆ ಅಂತಿಮ ಹಂತದಲ್ಲಿದ್ದು ನೇಮಕಾತಿ ಆದೇಶ ಹೊರಡಿಸುವಾಗ ಆದ್ಯತೆ ಮೇರೆಗೆ ಭರ್ತಿ ಮಾಡಲಾಗುವುದು

ಉ)ತಾಲ್ಲೂಕಿನಲ್ಲಿ ಒಟ್ಟು 45 ಕಿರಿಯ ಮಹಿಳಾ ಆರೋಗ್ಯ ಸಹಾಯಕಿ ಹುದ್ದೆಗಳು ಮಂಜೂರಾಗಿದ್ದು ಅವುಗಳಲ್ಲಿ 37 ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ 8 ಹುದ್ದೆಗಳು ಖಾಲಿ ಇರುತ್ತವೆ

ರಾಜ್ಯದಲ್ಲಿ 23 ಆರೋಗ್ಯ ಸಹಾಯಕಿಯರ ತರಬೇತಿ ಶಾಲೆ ಇದ್ದು ಇದರಲ್ಲಿ ಪ್ರತಿ ವರ್ಷ 720 ಅಭ್ಯರ್ಥಿಗಳು 18 ತಿಂಗಳ ತರಬೇತಿಯನ್ನು ಪಡೆಯುತ್ತಾರೆ ಸದ್ಯಕ್ಕೆ ತರಬೇತಿ ಪಡೆದ ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರು ಯಾರು ಇರುವುದಿಲ್ಲ ತರಬೇತಿ ಪಡೆದು ಉತ್ತೀರ್ಣರಾಗಿ ಬಂದಂತಹವರಿಗೆ ನೇಮಕಾತಿ ಮಾಡಲು ಕ್ರಮ ಕೈಗೊಳ್ಳಲಾಗುವುದು

ಊ) ತಾಲ್ಲೂಕಿನಲ್ಲಿ ಒಟ್ಟು 45 ಉಪಕೇಂದ್ರಗಳಿದ್ದು 31 ಕಟ್ಟಡಗಳಿರುತ್ತವೆ 'ಈ ಕಟ್ಟಡಗಳಲ್ಲಿ ಸಣ್ಣಪುಟ್ಟ ದುರಸ್ತಿಗಳನ್ನು ಜಿಲ್ಲಾ ಪಂಚಾಯತ್ ಅಡಿಯಲ್ಲಿ ಒದಗಿಸಿರುವ ಅನುದಾನದಲ್ಲಿ ಕೈಗೊಳ್ಳಲಾಗುತ್ತದೆ ಈಗ ಎನ್ ಆರ್ ಹೆಚ್ ಎಂ ಅಡಿಯಲ್ಲಿ ಒದಗಿಸಿರುವ ಮುಕ್ತ ನಧಿ ಅಡಿಯಲ್ಲಿ ಹಾಗೂ ಈ ವರ್ಷ ಜಾರಿಯಾಗಲಿರುವ ಕೆ ಎಚ್ ಎಸ್ ಆರ್ ಡಿ ಪಿ ಯೋಜನೆಯಲ್ಲಿಯೂ ದುರಸ್ತಿಗಳಿಗೆ ಅವಕಾಶ ಕಲ್ಪಿಸಲಾಗಿತ್ತದೆ

ಸೊಮಣ್ಣ ವಿ (ಬಿನ್ನಿ ಪೇಟೆ) 188(394)

ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ

ಅ)ರಾಜ್ಯದ ಯಾವ ಯಾವ ಖಾಸಗೀ ವೈದ್ಯಕೀಯ ಕಾಲೇಜುಗಳಿಗೆ ಇಲ್ಲಿಯವರೆಗೆ ಡೀಮ್ಡ ಯೂನಿವರ್ಸಿಟಿ ಸ್ಥಾನಮಾನವನ್ನು ನೀಡಲಾಗಿದೆ?

ಆ) ರಾಜ್ಯ ಸರಕಾರವು ಜೆ ಎಸ್ ಎಸ್ ವೈದ್ಯಕೀಯ ಮಹಾ ವಿದ್ಯಾಲಯಕ್ಕೆ ಡೀಮ್ಡ್ ಯೂನಿವರ್ಸಿಟಿ ಸ್ಥಾನಮಾನ ನೀಡಲು ಶಿಫಾರಸ್ಸು ಮಾಡಿ ಕೇಂದ್ರಕ್ಕೆ ಕಳುಹಿಸಿದೆಯೇ?

ಇ) ಕಳುಹಿಸಿದ್ದಲ್ಲಿ, ಮೇಲ್ಕಂಡ ವೈದ್ಯಕೀಯ ಕಾಲೇಜಿಗೆ ಈ ಸ್ಥಾನಮಾನ ದೊರಕಿಸಿ ಕೊಡಲು ಸರಕಾರ ಕೈಗೊಂಡ ಕ್ರಮಗಳೇನು?

ಶ್ರೀ ವಿ ಎಸ್ ಆಚಾರ್ಯ

ಅ) 1 ಕಸ್ತೂರ ಬಾ ವೈದ್ಯಕೀಯ ಕಾಲೇಜು, ಮಂಗಳೂರು

2 ಕಸ್ತೂರ ಬಾ ವೈದ್ಯಕೀಯ ಕಾಲೇಜು, ಮಣಿಪಾಲ್

3 ಜೆ ಎನ್ ವೈದ್ಯಕೀಯ ಕಾಲೇಜು, ಬೆಳಗಾಂ

4 ಶ್ರೀ ದೇವರಾಜ್ ಅರಸ್ ವೈದ್ಯಕೀಯ ಕ್ಕಾಲೇಜು, ಕೋಲಾರ

ಆ)ಇಲ್ಲ

ಇ) ಉದ್ಭವಿಸುವುದಿಲ್ಲ

189(363) ಶ್ರೀ ವಾಟಾಳ್ ನಾಗರಾಜ್(ಚಾಮರಾಜನಗರ)

ಮಾನ್ಯ ಆರೋಗ್ಯ ಮತ್ತು ಕುಟುಂಬ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ

ಅ)ಬೆಂಗಳೂರು ನಗರವು ಸೇರಿದಂತೆ ನಾಯಿಗಳ ಕಡಿತದಿಂದ ಇಲ್ಲಿಯವರೆಗೆ ಸತ್ತವರ ಸಂಖ್ಯೆ ಎಷ್ಟು?

ಆ)ನಾಯಿಗಳ ಕಡಿತವನ್ನು ತಪ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಇ)ನಾಯಿ,ವಿಷಪೂರಿತ ಹಾವು ಮತ್ತು ಕುದುರೆ ಇವುಗಳ ಕಡಿತಕ್ಕೆ ಒಳಗಾದರೆ ತಕ್ಷಣ ಔಷಧಿಯನ್ನು ಒದಗಿಸಲು ಕೈಗೊಂಡ ಕ್ರಮವೇನು?